ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

2

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 06/12/202

# ಅಧಿವೇಶನದಲ್ಲಿ ಗೋಹತ್ಯೆ ನಿಷೇಧ ಜಾರಿಗೆ ಯತ್ನ: ಸಿಎಂ

## ಮುಂದಿನ ಚುನಾವಣೇಲಿ 150 ಸೀಟ್ ಗೆಲ್ಲುವ ಗುರಿ ನಮ್ಮದು

ಕ. ಪ್ರ. 6/12/20

ಬೆಳಗಾವಿ: ಗೋಹತ್ಯೆ ನಿಷೇಧ ಜಾರಿಗೆ ತರಲು ಈ ಅಧಿವೇಶನದಲ್ಲಿ ಪ್ರಯತ್ನ ಮಾಡುತ್ತೇವೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಭರವಸೆ ನೀಡಿದ್ದಾರೆ.

ಶನಿವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಗಾವಿ ದೊಡ್ಡ ಜಿಲ್ಲೆಯಾಗಿದ್ದು, 18 ವಿಧಾನಸಭೆ ಕ್ಷೇತ್ರಗಳ ಪೈಕಿ 13 ವಿಧಾನಸಭಾ ಕ್ಷೇತ್ರ ಗೆದ್ದಿದ್ದೇವೆ. ಬೇರೆ ಬೇರೆ ಜಿಲ್ಲೆಗಳಲ್ಲಿ ಸಂಘಟನೆ ಬಲಪಡಿಸುವ ದೃಷ್ಟಿಯಿಂದ ಸಭೆ ಮಾಡುತ್ತಿದ್ದೇವೆ. ಬಿಜೆಪಿ ಕಾರ್ಯಕಾರಣಿ ಸಭೆ ಬೆಳಗಾವಿಯಲ್ಲಿ ಇದೊಂದು ಯಶಸ್ವಿ ಪ್ರಯೋಗ ಎಂದರು. ರಾಷ್ಟ್ರೀಯ ನಾಯಕರು ಬಂದಿದ್ದಾರೆ. ಅವರ ಮಾರ್ಗದರ್ಶನ ತೆಗೆದುಕೊಳ್ಳುತ್ತೇವೆ. ಪಕ್ಷ ಬಲವರ್ಧನೆ ಮಾಡಿ ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಸ್ವಂತ ಶಕ್ತಿ ಮೇಲೆ 140 ರಿಂದ 150 ಸೀಟ್ ಗೆಲ್ಲುವ ಗುರಿಯಿದೆ. ಆ ನಿಟ್ಟಿನಲ್ಲಿ ಕಾರ್ಯಕಾರಿಣಿ ಸಭೆಯಲ್ಲಿ ಚರ್ಚೆ ಆಗುತ್ತದೆ ಎಂದು ತಿಳಿಸಿದರು.

## ಗೋಹತ್ಯೆ ನಿಷೇಧ: ಡಿಕೆಶಿ ಸವಾಲು

ಬೆಳಗಾವಿ: ಯಾವುದೊಂದು ಸಮಾಜ ಗಮನದಲ್ಲಿಟ್ಟುಕೊಂಡು ಗೋ ಹತ್ಯೆ ನಿಷೇಧ ಮಾಡಲು ಹೊರಟಿದ್ದಾರೆ ಎಂದು ಪ್ರಶ್ನಿಸಿರುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರು, ವಯಸ್ಸಾದ ಗೋವುಗಳನ್ನು ಯಾರು ಖರೀದಿ ಮಾಡುತ್ತಾರೆ. ಗೋ ಹತ್ಯೆ ನಿಷೇಧ ಕಾಯ್ದೆ ತರಲಿ ನೋಡೋಣ ಎಂದು ಸವಾಲೆಸೆದಿದ್ದಾರೆ. ನಗರದ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಜಿ ಸಿಎಂ ಕುಮಾರಸ್ವಾಮಿ ಆರೋಪ ಮಾಡಿರುವ ವೈಯಕ್ತಿಕ ಆರೋಪಕ್ಕೆ ನಾನು ಉತ್ತರ ಕೊಡುವುದಿಲ್ಲ ಎಂದೂ ಇದೇ ವೇಳೆ ಹೇಳಿದರು.